ದೂರವಾಣಿ ಸಂಖ್ಯೆ: 080–22212343
ಫ್ಯಾಕ್ಸ್ ಸಂಖ್ಯೆ: 080–22278803
ಅಂತರ್ಜಾಲ: www.kptcl.com
ಇ–ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521

**(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು–560 009)**

**ಸಂಖ್ಯೆ: ಕವಿಪ್ರನಿನಿ/ಬಿ16/9457/2019–20** **ದಿನಾಂಕ:** 15.04.2020

## ಸುತ್ತೋಲೆ

**ವಿಷಯ:** ಕೋವಿಡ್–19 ವೈರಾಣು ಹರಡುವಿಕೆಯನ್ನು ತಡೆಗಟ್ಟಲು ಮುಂಜಾಗ್ರತಾ ಕ್ರಮವಾಗಿ ಹಾಗೂ ಕಚೇರಿಯ ಕೆಲಸಗಳ ಕಾರ್ಯನಿರ್ವಹಣೆ ಸುಗಮವಾಗಿ ನಡೆಯಲು ದಿನಾಂಕ: 15.04.2020 ರಿಂದ ಕವಿಪ್ರನಿನಿಯ ಅಧಿಕಾರಿ/ನೌಕರರು ಕಚೇರಿಗೆ ಹಾಜರಾಗುವ ಕುರಿತು.

**ಉಲ್ಲೇಖ:**
1. ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು ರವರ ಸುತ್ತೋಲೆ ಸಂಖ್ಯೆ: ಸಿಆಸುಇ 123 ಡಿಬಿಎಂ 2020, ದಿನಾಂಕ: 15.04.2020.
2. ಗೃಹ ಕಾರ್ಯದರ್ಶಿ, ಭಾರತ ಸರ್ಕಾರ, ನವದೆಹಲಿ ರವರ ಆದೇಶ ಸಂಖ್ಯೆ: 40–3/2020–ಡಿಎಂ–ಐ(ಎ), ದಿನಾಂಕ: 15.04.2020.

*****

ರಾಜ್ಯ ಸರ್ಕಾರದ ಉಲ್ಲೇಖ–1 ರ ಸುತ್ತೋಲೆಯ ಪ್ರಕಾರ, ನಿಗಮದ ಸುಗಮ ಕೆಲಸ ಕಾರ್ಯಗಳ ನಿರ್ವಹಣೆಗಾಗಿ ಎಲ್ಲಾ ವರ್ಗದ ಅಧಿಕಾರಿ/ನೌಕರರು ದಿನಾಂಕ: 15.04.2020 ರಿಂದ ಕರ್ತವ್ಯಕ್ಕೆ ಹಾಜರಾಗತಕ್ಕದ್ದು ಹಾಗೂ ಈ ಕೆಳಕಂಡ ಸೂಚನೆಗಳನ್ನು ಪಾಲಿಸುವುದು:

1. ದಿನಾಂಕ: 15.04.2020 ರಿಂದ ನಿಗಮದ ಎಲ್ಲಾ ಕಚೇರಿಗಳು ಕಾರ್ಯನಿರ್ವಹಿಸುವುದು.
2. ನಿಗಮದಲ್ಲಿ ಲಭ್ಯವಿರುವ ವಾಹನಗಳು ಮತ್ತು ಹೊರಗಿನ ಏಜೆನ್ಸಿಗಳಿಂದ ಈಗಾಗಲೇ ಬಾಡಿಗೆಗೆ ಪಡೆದಿರುವ ವಾಹನಗಳ ಮುಖಾಂತರ ಅಧಿಕಾರಿ/ನೌಕರರನ್ನು ಕಚೇರಿಗೆ ಕರೆತರಲು ಕ್ರಮವಹಿಸುವುದು.
3. ದೃಷ್ಟಿಹೀನ ಮತ್ತು ಇತರೆ ಅಂಗವೈಕಲ್ಯ ಹೊಂದಿರುವ ಅಧಿಕಾರಿ/ನೌಕರರು ಕಚೇರಿಗೆ ಹಾಜರಾಗುವುದರಿಂದ ವಿನಾಯಿತಿ ನೀಡಲಾಗಿದೆ.
4. ಎಲ್ಲಾ ಕಚೇರಿಗಳಲ್ಲಿ ನೌಕರರು ಕಚೇರಿಗೆ ಹಾಜರಾಗುವ ಮತ್ತು ನಿರ್ಗಮಿಸುವ ಸಂದರ್ಭದಲ್ಲಿ ಕಡ್ಡಾಯವಾಗಿ ಥರ್ಮಲ್ ಸ್ಕ್ಯಾನಿಂಗ್‌ಗೆ ಒಳಪಡಿಸುವುದು.
5. ಎಲ್ಲಾ ಕಚೇರಿಗಳ ಲಿಫ್ಟ್‌ಗಳಲ್ಲಿ 2 ರಿಂದ 4 ಜನರು ಮಾತ್ರ ಒಮ್ಮೆಗೆ ಉಪಯೋಗಿಸುವುದು. ಆದಾಗ್ಯೂ ನೌಕರರು ಮೆಟ್ಟಿಲು ಮೂಲಕ ಸಂಚರಿಸುವುದನ್ನು ಉತ್ತೇಜಿಸುವುದು.
6. ಕಚೇರಿಯ ಆವರಣದಲ್ಲಿ ಗುಟ್ಕಾ, ಪಾನ್ ಮಸಾಲಾ ಮತ್ತು ತಂಬಾಕು ಜಗಿಯುವುದನ್ನು ಮತ್ತು ಉಗುಳುವುದನ್ನು ನಿರ್ಬಂಧಿಸಲಾಗಿದೆ.
7. ಕಚೇರಿಯ ಆವರಣಕ್ಕೆ ಬರುವ ಎಲ್ಲಾ ವಾಹನಗಳು, ಪ್ರವೇಶ ದ್ವಾರಗಳು, ಸಭೆಯ ಸಭಾಂಗಣಗಳು, ಆವರಣ, ಲಿಫ್ಟ್, ಗೋಡೆಗಳು ಹಾಗೂ ಉಪಕರಣಗಳಿಗೆ ಕಡ್ಡಾಯವಾಗಿ ಸೋಂಕುನಿವಾರಕಗಳನ್ನು ಸಿಂಪಡಿಸಲು ಕ್ರಮಕೈಗೊಳ್ಳುವುದು.
8. ಯಾವುದೇ ಸಾರ್ವಜನಿಕರನ್ನು ಕಚೇರಿಗಳಿಗೆ ಭೇಟಿ ನೀಡದಂತೆ ನಿರ್ಬಂಧವನ್ನು ವಿಧಿಸುವುದು. ಗುಂಪುಗೂಡುವಿಕೆ ಮತ್ತು ಸಭೆ ನಡೆಸುವುದನ್ನು ನಿರ್ಬಂಧಿಸಲು ಕ್ರಮ ಕೈಗೊಳ್ಳುವುದು.

**9.** ಕೆಲಸ ನಿರ್ವಹಿಸುವ ಸಿಬ್ಬಂದಿಗಳಿಗೆ **ಮಾಸ್ಕ್** ಧರಿಸುವುದು ಕಡ್ಡಾಯವಾಗಿರುತ್ತದೆ. ಆದುದರಿಂದ **ಮಾಸ್ಕ್, ಸ್ಯಾನಿಟೈಜ಼ರ್, ಸಾಬೂನು, ಕೈತೊಳೆಯುವ ದ್ರಾವಣ**ವನ್ನು ಒದಗಿಸುವುದು ಹಾಗೂ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವುದು, ಕಚೇರಿಯಲ್ಲಿ ಬಳಸುವ ಎಲ್ಲಾ ರೀತಿಯ ಉಪಕರಣಗಳು/ಆವರಣ ಹಾಗೂ ಶೌಚಾಲಯಗಳಲ್ಲಿ ವೈರಾಣು ಹರಡದಂತೆ ತಡೆಗಟ್ಟುವ ನಿಟ್ಟಿನಲ್ಲಿ ಬಳಕೆದಾರ ಸ್ನೇಹಿ ಸೋಂಕುನಿವಾರಕಗಳನ್ನು ಬಳಸಿ ಸೋಂಕುರಹಿತಗೊಳಿಸಲು ಕ್ರಮ ಕೈಗೊಳ್ಳುವುದು.

**10.** ರಾಜ್ಯದ ಯಾವುದೇ ಕಚೇರಿಯಲ್ಲಿ ಸೋಂಕಿತ ಪ್ರಕರಣವೇನಾದರೂ ಕಂಡುಬಂದಲ್ಲಿ ಸಂಪೂರ್ಣವಾಗಿ ಕಚೇರಿಯನ್ನು ಮುಚ್ಚಿ, ಸದರಿ ಕಚೇರಿಯ ಕೆಲಸಗಳನ್ನು ಸಾರ್ವಜನಿಕರಿಗೆ ತೊಂದರೆಯಾಗದಂತೆ, ಸಮೀಪದ ಕಚೇರಿಯಿಂದ ಕೆಲಸ ನಿರ್ವಹಿಸಲು ಪರ್ಯಾಯ ವ್ಯವಸ್ಥೆಯನ್ನು ಮಾಡುವುದು ಮತ್ತು ರೋಗಾಣು ಸೋಂಕಿತ ಕಚೇರಿಯ ಎಲ್ಲಾ ಸಿಬ್ಬಂದಿಯನ್ನು ಆರೋಗ್ಯ ಇಲಾಖೆಯ ಸಹಯೋಗದೊಂದಿಗೆ ಪ್ರತ್ಯೇಕವಾಗಿರಿಸಲು ಕ್ರಮ ಕೈಗೊಳ್ಳುವುದು.

**11.** ಕವಿಪ್ರನಿನಿಯಲ್ಲಿ ವಿವಿಧ ಏಜೆನ್ಸಿ ಮೂಲಕ ಪಡೆದಿರುವ ಗುತ್ತಿಗೆ ಕಾರ್ಮಿಕರನ್ನು ಲಾಕ್ ಡೌನ್ ಅವಧಿಯಲ್ಲಿ ಕರ್ತವ್ಯದಲ್ಲಿದ್ದಾರೆಂದು ಸಂಬಂಧಿಸಿದ ಏಜೆನ್ಸಿಯವರು ಪರಿಗಣಿಸಬೇಕಿರುತ್ತದೆ. ಸದರಿಯವರುಗಳನ್ನು ಕೆಲಸದಿಂದ ವಜಾಗೊಳಿಸಬಾರದು ಮತ್ತು ಸದರಿರವರಿಗೆ ಏಜೆನ್ಸಿಯವರು ಯಾವುದೇ ವೇತನವನ್ನು ಕಡಿತಗೊಳಿಸದಿರುವ ಬಗ್ಗೆ ಹಾಗೂ ಸದರಿಯವರಿಗೆ ವೇತನವನ್ನು ನಿಗದಿತ ಸಮಯದೊಳಗೆ ಪಾವತಿಸಿರುವ ಬಗ್ಗೆ ಸಂಬಂಧಿಸಿದ ಕಚೇರಿಯ ಮುಖ್ಯಸ್ಥರು ದೃಢಪಡಿಸಿಕೊಳ್ಳುವುದು.

**12.** ಸಂಬಂಧಪಟ್ಟ ಕಚೇರಿಯ ಮುಖ್ಯಸ್ಥರು ತಮ್ಮ ಕಾರ್ಯವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರಿಗೆ ಮತ್ತು ವಾಹನಗಳಿಗೆ ಅಡೆತಡೆ ಉಂಟಾದಲ್ಲಿ ಸಂಬಂಧಪಟ್ಟ ಪೊಲೀಸ್ ಇಲಾಖೆಯಿಂದ 'ಪಾಸ್' ಅನ್ನು ಪಡೆಯಲು ಕ್ರಮಕೈಗೊಳ್ಳುವುದು.

**13.** ವ್ಯವಸ್ಥಾಪಕ ನಿರ್ದೇಶಕರು, ವಿದ್ಯುತ್ ಸರಬರಾಜು ಕಂಪನಿಗಳು/ಪಿ.ಸಿ.ಕೆ.ಎಲ್ ರವರು ತಮ್ಮ ವ್ಯಾಪ್ತಿಯ ಕಚೇರಿಗಳಿಗೆ ಸಂಬಂಧಿಸಿದ ತುರ್ತು/ಅಗತ್ಯ/ದೈನಂದಿನ ಕಾರ್ಯಗಳನ್ನು ನಿರ್ವಹಿಸಲು ಅಗತ್ಯವಿರುವ ಅಧಿಕಾರಿ/ನೌಕರರು ಕಚೇರಿಗೆ ಬರುವ ವಿಷಯದಲ್ಲಿ ತಮ್ಮ ಹಂತದಲ್ಲಿ ಸೂಕ್ತ ನಿರ್ಧಾರವನ್ನು ತೆಗೆದುಕೊಳ್ಳಬಹುದಾಗಿದೆ.

ಈ ಸುತ್ತೋಲೆಯು ದಿನಾಂಕ: 19.04.2020 ರವರೆಗೆ ಅಸ್ತಿತ್ವದಲ್ಲಿರುತ್ತದೆ.

15/4/2020

"ಮಾನ್ಯ ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ
ಇವರಿಂದ ಅನುಮೋದಿಸಲ್ಪಟ್ಟಿರುತ್ತದೆ"

**ನಿರ್ದೇಶಕರು**
**(ಆಡಳಿತ ಮತ್ತು ಮಾನವ ಸಂಪನ್ಮೂಲ)**

ಗೆ:

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

www.kptcl.com/eprasarana for information of:

6. ಎಲ್ಲಾ ಅಧೀಕ್ಷಕ ಇಂಜನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜನಿಯರ್ (ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂದಣಿ ಸಂಖ್ಯೆ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜನಿಯರ್‌ಗಳ ಸಂಘ, ಬೆಂಗಳೂರು, ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.

3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ(ನೋಂದಣಿ ಸಂಖ್ಯೆ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಪಿಂಚಣಿದಾರರ ಸಂಘ, ಕಾವೇರಿಭವನ, ಬೆಂಗಳೂರು.